ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂ: ಡಿಸಿಇ/ಟಿಆರ್‌ಎನ್/ಟಿಆರ್‌ಎನ್/24/2023-ಟಿಡಿಜಿ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು. ದಿನಾಂಕ: 25.07.2023.

## ಸುತ್ತೋಲೆ

ವಿಷಯ: 2023 ನೇ ಸಾಲಿಗೆ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಬೋಧಕರ ವರ್ಗಾವಣೆಯ ಪರಿಷ್ಕೃತ ವೇಳಾಪಟ್ಟಿ ಪ್ರಕಟಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸಮಸಂಖ್ಯೆಯ ಅಧಿಸೂಚನೆ ದಿನಾಂಕ: 05.07.2023 ಮತ್ತು ದಿ.17.07.2023.

** ** **

ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಬೋಧಕರ (ಪ್ರಾಧ್ಯಾಪಕರು, ಸಹ/ ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಮತ್ತು ಕ್ರೀಡಾ & ದೈಹಿಕ ಶಿಕ್ಷಣ ನಿರ್ದೇಶಕರು) ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗಳು ಹಾಗೂ ವಿಶೇಷ ಪ್ರಕರಣಗಳ ಕೋರಿಕೆ ವರ್ಗಾವಣೆ ವರ್ಗಾವಣೆ ಪ್ರಕ್ರಿಯೆ ಕೈಗೊಳ್ಳಲು ಉದ್ದೇಶಿಸಿ ವೇಳಾಪಟ್ಟಿಯನ್ನು ಹಾಗೂ ವರ್ಗಾವಣೆಯ ತಾತ್ಕಾಲಿಕ ಆದ್ಯತಾ ಪಟ್ಟಿಯನ್ನು ಈಗಾಗಲೇ ಪ್ರಕಟಿಸಲಾಗಿರುತ್ತದೆ.

ಆದರೆ ವೈದ್ಯಕೀಯ ಪ್ರಕರಣಗಳ ಪರಿಶೀಲನಾ ವರದಿ ಸಲ್ಲಿಕೆಯಲ್ಲಿ ವಿಳಂಬವಾದ ಹಿನ್ನಲೆಯಲ್ಲಿ ಬೋಧಕರ ವರ್ಗಾವಣೆ ಪ್ರಕ್ರಿಯೆಯ ವೇಳಾಪಟ್ಟಿಯನ್ನು ಕೆಳಕಂಡಂತೆ ಮರು ಪರಿಷ್ಕರಿಸಲಾಗಿದೆ.

**ವರ್ಗಾವಣೆ ಕೌನ್ಸಿಲಿಂಗ್‌ನ ತಾತ್ಕಾಲಿಕ ವೇಳಾಪಟ್ಟಿ:**

| ಕ್ರ. ಸಂ. | ವಿವರ | ದಿನಾಂಕ: |
|---|---|---|
| 1 | 1. ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆ ಮತ್ತು ವಿಶೇಷ ಪ್ರಕರಣಗಳ ತಾತ್ಕಾಲಿಕ ವರ್ಗಾವಣಾ ಆದ್ಯತಾ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಾಂಕ<br>2. ವೈದ್ಯಕೀಯ ಪ್ರಕರಣಗಳ ತಾತ್ಕಾಲಿಕ ವರ್ಗಾವಣಾ ಆದ್ಯತಾ ಪಟ್ಟಿ ಪ್ರಕಟಣಾ ದಿನಾಂಕ | 24.07.2023 |
| 2 | ವೈದ್ಯಕೀಯ ಪ್ರಕರಣಗಳ ತಾತ್ಕಾಲಿಕ ವರ್ಗಾವಣಾ ಆದ್ಯತಾ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಾಂಕ | 25.07.2023 |
| 3 | ವಿಶೇಷ ಪ್ರಕರಣಗಳ ಹಾಗೂ ಸಾರ್ವಜನಿಕ ಹಿತಾಸಕ್ತಿಯ ಅಂತಿಮ ವರ್ಗಾವಣೆ ಆದ್ಯತಾ ಪಟ್ಟಿ ಮತ್ತು ಕೌನ್ಸಿಲಿಂಗ್ ಮೂಲಕ ಭರ್ತಿ ಮಾಡುವ ಖಾಲಿಹುದ್ದೆಗಳ ಪ್ರಕಟಣೆ | 26-07-2023 |
| 4 | ಕೌನ್ಸಿಲಿಂಗ್ ಪ್ರಾರಂಭದ ದಿನಾಂಕ<br>(ವಿವರವಾದ ವೇಳಾಪಟ್ಟಿಯನ್ನು ಅಂತಿಮ ಆದ್ಯತಾ ಪಟ್ಟಿ ಪ್ರಕಟಣೆ ನಂತರ ಪ್ರಕಟಿಸಲಾಗುವುದು) | 27-07-2023 |

ವರ್ಗಾವಣೆಗೆ ಸಂಬಂಧಿಸಿದಂತೆ ಮಾಹಿತಿಗಳನ್ನು ಕಾಲಕಾಲಕ್ಕೆ ಇಲಾಖಾ ವೆಬ್‌ಸೈಟ್‌ನ ಬೋಧಕರ ವರ್ಗಾವಣೆ – 2023 Web page ನಲ್ಲಿ ಪ್ರಕಟಿಸಲಾಗುವುದು. ಸಂಬಂಧಿಸಿದವರು ಇಲಾಖಾ ವೆಬ್‌ಸೈಟ್ ಅನ್ನು ಗಮನಿಸುವುದು.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

ಪ್ರತಿಯನ್ನು- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

1. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಬೋಧಕರುಗಳಿಗೆ
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಹಾಗೂ ಕಲಬುರಗಿ
3. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
4. ರಕ್ಷಾ ಕಡತ.
5. ಕಛೇರಿ ಪ್ರತಿ.